## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ವರ್ಗಗಳ ಮಾರಾಟಗಾರರ ನಮೂದಿತ ಪಟ್ಟಿಯ ಕುರಿತು.

ಓದಲಾಗಿದೆ:

ದಿನಾಂಕ 5.1.2015ರ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 63 ಇಆಇ 2013.

ಪ್ರಸ್ತಾವನೆ:

ರಾಜ್ಯದಲ್ಲಿರುವ ವಿವಿಧ ಸರ್ಕಾರಿ ಕಛೇರಿಗಳ ಗಣಕೀಕರಣಕ್ಕಾಗಿ ಅವಶ್ಯವಿರುವ ಗಣಕ ಯಂತ್ರಗಳು, ಪ್ರಿಂಟರಗಳು, ಅವುಗಳ ಪೂರಕ ಸಾಧನಗಳು, ವಿವಿಧ ತಂತ್ರಾಂಶಗಳು, ತಂತ್ರಾಂಶ ಸಿದ್ಧಪಡಿಸುವ, ನೆಟ್ ವರ್ಕಿಂಗ್, ಯು.ಪಿ.ಎಸ್., ತರಬೇತಿ, ವೆಬ್ ಡಿಸೈನಿಂಗ್, ಡೇಟಾ ಎಂಟ್ರಿ, ಹಾಗೂ ವಾರ್ಷಿಕ ನಿರ್ವಹಣೆ ಮುಂತಾದ ಸಾಮಗ್ರಿ/ಸೇವೆಗಳನ್ನು ಪೂರೈಸುವ ಇತ್ಯಾದಿಗಾಗಿ ನಾನಾ ಸಂಸ್ಥೆಗಳನ್ನು ಸಂಕ್ಷಿಪ್ತಗೊಳಿಸಿ, ಮಾರಾಟಗಾರರ ಪಟ್ಟಿಗೆ ಮೇಲೆ ಓದಲಾದ ಸರ್ಕಾರದ ಆದೇಶದ ಮೂಲಕ ಅನುಮೋದನೆ ನೀಡಲಾಗಿದೆ. ಸದರಿ ಪಟ್ಟಿಯಲ್ಲಿರುವ ಸಂಸ್ಥೆಗಳ ಸಿಂಧುತ್ವವು 31.03.2015ಗೆ ಕೊನೆಗೊಳ್ಳಲಿದೆ. 2015-2016ನೇ ಸಾಲಿಗೆ ಹೊಸ ಪಟ್ಟಿ ಸಿದ್ಧಪಡಿಸುವ ಪ್ರಕ್ರಿಯೆ ಪ್ರಾರಂಭವಾಗಿದ್ದು, ಇನ್ನೂ ಅಂತಿಮವಾಗಿಲ್ಲವಾದ್ದರಿಂದ ಸದರಿ ಆದೇಶದನ್ವಯ ಪ್ರಸ್ತುತ ಚಾಲ್ತಿಯಲ್ಲಿರುವ ಮಾರಾಟಗಾರರ ಪಟ್ಟಿಯ ಸಿಂಧುತ್ವವನ್ನು ವಿಸ್ತರಿಸುವುದು ಅವಶ್ಯವಾಗಿದೆ. ಅದರಂತೆ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 99 ಇಆಇ 2014, ಬೆಂಗಳೂರು ದಿನಾಂಕ 30ನೇ ಏಪ್ರಿಲ್ 2015**

2. ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನೆಲೆಯಲ್ಲಿ, ರಾಜ್ಯದಲ್ಲಿರುವ ವಿವಿಧ ಸರ್ಕಾರಿ ಕಛೇರಿಗಳಲ್ಲಿ ಗಣಕೀಕರಣಕ್ಕಾಗಿ ಅವಶ್ಯವಿರುವ ಗಣಕ ಯಂತ್ರಗಳು, ಪ್ರಿಂಟರಗಳು, ಅವುಗಳ ಪೂರಕ ಸಾಧನಗಳು, ವಿವಿಧ ತಂತ್ರಾಂಶಗಳು, ತಂತ್ರಾಂಶ ಸಿದ್ಧಪಡಿಸುವ, ನೆಟ್ ವರ್ಕಿಂಗ್, ಯು.ಪಿ.ಎಸ್., ತರಬೇತಿ, ವೆಬ್ ಡಿಸೈನಿಂಗ್, ಡೇಟಾ ಎಂಟ್ರಿ, ಹಾಗೂ ವಾರ್ಷಿಕ ನಿರ್ವಹಣೆ ಮುಂತಾದ ಸಾಮಗ್ರಿ/ಸೇವೆಗಳನ್ನು ಪೂರೈಸುವ ಇತ್ಯಾದಿಗಾಗಿ ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿನ ಸಂಸ್ಥೆಗಳ ಸಿಂಧುತ್ವವನ್ನು ದಿನಾಂಕ 1.4.2015 ರಿಂದ ದಿನಾಂಕ 30.6.2015ರವರೆಗೆ ಅಥವಾ ಹೊಸ ಪಟ್ಟಿ ಸಿದ್ಧಗೊಳ್ಳುವವರೆಗೆ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ವಿಸ್ತರಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ,

30/4/15

(ವೈ.ಸುಶೀಲ)

ಪೀಠಾಧಿಕಾರಿ-2,

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ).

1. ಮಹಾಲೇಖಾಪಾಲಕರು, ಲೆಕ್ಕಪತ್ರ 1 ಮತ್ತು 2, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಸರ್ಕಾರದ ಎಲ್ಲಾ ಇಲಾಖೆಗಳ ಮುಖ್ಯಸ್ಥರು.
4. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆಕ ಇಲಾಖೆ (ವೆಚ್ಚ-1), ವಿಧಾನ ಸೌಧ, ಬೆಂಗಳೂರು.
6. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟನೆಗಾಗಿ.
7. ಸಂಬಂಧಪಟ್ಟ ಸಂಸ್ಥೆಗಳು.
8. ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿಗಳು.